# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 439 |
| ಮಾನ್ಯ ಸದಸ್ಯರ ಹೆಸರು | ಶ್ರೀ ರಘು ಆರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 19-08-2026 |
| ಉತ್ತರಿಸುವ ಸಚಿವರು | ಉಪ ಮುಖ್ಯಮಂತ್ರಿಗಳು ಮತ್ತು ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಮೈಸೂರು ಉಪ ನೋಂದಣಾಧಿಕಾರಿಗಳ ಕಛೇರಿಗಳಲ್ಲಿ ಸಾರ್ವಜನಿಕರಿಗೆ ಮತ್ತು ಸಿಬ್ಬಂದಿಗಳಿಗೆ ಮೂಲಭೂತ ಸೌಕರ್ಯಗಳಿಂದ ಅನಾನುಕೂಲತೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು) | ಮೈಸೂರಿನಲ್ಲಿ ಒಟ್ಟು 05 ಉಪ ನೋಂದಣಿ ಕಛೇರಿಗಳಿದ್ದು, ಸದರಿ ಉಪ ನೋಂದಣಿ ಕಛೇರಿಗಳಲ್ಲಿ ಸಾರ್ವಜನಿಕರಿಗೆ ಮತ್ತು ಸಿಬ್ಬಂದಿಗಳಿಗೆ ಅಗತ್ಯವಾಗಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ.<br><br>ಮೈಸೂರು ಉತ್ತರ ಉಪ ನೋಂದಣಿ ಕಛೇರಿಯನ್ನು ಆಧುನೀಕರಣಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಕಂಇ/378/ಎಂಎನ್ಎಸ್ಎ/2025, ದಿನಾಂಕ:06.03.2026 ರಲ್ಲಿ ರೂ.50.00 ಲಕ್ಷ ಮತ್ತು ಮೈಸೂರು ದಕ್ಷಿಣ ಉಪ ನೋಂದಣಿ ಕಛೇರಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ರೂ.2.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದ್ದು, ಸದರಿ ಕಛೇರಿಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಮತ್ತು ಸ್ವಂತ ಕಟ್ಟಡ ನಿರ್ಮಾಣ ಮಾಡಲು ನೋಂದಣಿ ಮಹಾಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರವರಿಂದ ಕ್ರಮವಾಗಿ ದಿನಾಂಕ: 26.05.2026 ಮತ್ತು 22.05.2026 ರಂದು ಆಡಳಿತಾತ್ಮಕ ಅನುಮೋದನೆ ನೀಡಿ, ಕರ್ನಾಟಕ ಗೃಹ ಮಂಡಳಿಗೆ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. |
| ಆ | ಮೈಸೂರು ಉಪ ನೋಂದಣಾಧಿಕಾರಿಗಳ ಕಛೇರಿಯಲ್ಲಿ ಸಾರ್ವಜನಿಕರಿಗೆ ಮತ್ತು ಸಿಬ್ಬಂದಿಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | |

ಕಂಇ-ಎಂಎನ್ಎಸ್ಎ/256/2026

**(ಡಾ. ಜಿ.ಪರಮೇಶ್ವರ)**
ಉಪ ಮುಖ್ಯಮಂತ್ರಿ ಮತ್ತು
ಕಂದಾಯ ಸಚಿವರು